# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 958 (964)

ಸದಸ್ಯರ ಹೆಸರು : ಡಾ: ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 20.08.2025

ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಂದಾಯ ಜಮೀನುಗಳ ಬೀಳು ರಿಸ್ಟೋರ್ ಮಾಡಿಕೊಳ್ಳಲು 2014ರಲ್ಲಿ ಸರ್ಕಾರ ಆದೇಶ ಹೊರಡಿಸಿದ್ದು, ಇನ್ನೂ ಬಹಳಷ್ಟು ರೈತರು ಅರ್ಜಿ ಸಲ್ಲಿಸಲು ಸಾಧ್ಯವಾಗದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಸದರಿ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)? | ಭೂ ಕಂದಾಯ ಬಾಕಿಯಿರುವ ಜಮೀನುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 119(2)ಕ್ಕೆ ತಿದ್ದುಪಡಿ ಮಾಡಿ ಅವಧಿಯನ್ನು ವಿಸ್ತರಿಸಿರುವ ಕುರಿತು ದಿನಾಂಕ: 23.03.2023ರಂದು ಕರಡು ನಿಯಮಗಳ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಭೂ ಕಂದಾಯ ಬಾಕಿ ಇರುವ ಜಮೀನುಗಳ ಜಿಲ್ಲಾವಾರು ಮಾಹಿತಿಯನ್ನು ಪಡೆದು ಪರಿಶೀಲಿಸಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಆರ್‌ಡಿ 135 ಎಲ್‌ಜಿಕ್ಯೂ 2025

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು